# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1062
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 14.12.2023
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿದ್ದು, ಇದರಿಂದಾಗಿ ಹಲವಾರು ಬಾರಿ ಕಾನೂನು ಸುವ್ಯವಸ್ಥೆಗೆ ಭಂಗ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಡ್ರಗ್ಸ್ ಮಾರಾಟದ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇಂತಹ ಕೃತ್ಯದಲ್ಲಿ ಭಾಗಿಯಾದವರ ವಿರುದ್ಧ ಎನ್.ಡಿ.ಪಿ.ಎಸ್. ಕಾಯ್ದೆ, 1985ರಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ, ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. |
| (ಆ) | ಬಂದಿದ್ದಲ್ಲಿ, ಡ್ರಗ್ಸ್ ಮಾರಾಟ ದಂಧೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | **<u>ರಾಜ್ಯದಲ್ಲಿ ಡ್ರಗ್ಸ್ ದಂಧೆಯನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.</u>**<br>1. ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ **1908**ನ್ನು ಸ್ಥಾಪಿಸಿದ್ದು, ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>2. ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆ ಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್.ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>3. ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ.<br>4. ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ |

ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕ ವಿಡಿಯೋಗಳ ಮೂಲಕ ದುಷ್ಪರಿಣಾಮಗಳ ಬಗ್ಗೆ ಅರಿವು ಮತ್ತು ಜಾಗೃತಿ ಸಹ ಮೂಡಿಸಲಾಗುತ್ತಿದೆ.

5. ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು, ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ.
6. ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ನಡೆಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
7. ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.
8. ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.
9. ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್‌ಗಳ ವಿರುದ್ಧ "Prevention of Illicit Traffic in Narcotics Drugs & Psychotropic Substances Act, 1988"ರ ಅಡಿ ಪ್ರಕರಣ ... ಜರುಗಿಸಲಾಗುತ್ತಿದೆ.
10. ...ಲ್ಲ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ

| | | |
|---|---|---|
| | | ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.<br>11. ಕೊರಿಯರ್ಸ್ / ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>12. ರಾಜ್ಯದಲ್ಲಿ 46 ಸೈಬರ್ ಎಕಾನಾಮಿಕ್ & ನಾರ್ಕೊಟಿಕ್ ಪೊಲೀಸ್ ಠಾಣೆ(CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯನಿರ್ವಹಿಸುತ್ತಿದೆ. |
| (ಇ) | ಅಕ್ರಮವಾಗಿ ನೆಲೆಸಿರುವುದರ ಜೊತೆಗೆ ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವ ವಿದೇಶಿಯರ ವಿರುದ್ಧ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅಕ್ರಮವಾಗಿ ನೆಲೆಸಿರುವುದರ ಜೊತೆಗೆ ಡ್ರಗ್ಸ್ ಮಾರಾಟ ದಂಧೆಯನ್ನು ತಡೆಯಲು ಸರ್ಕಾರ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರ ವಿರುದ್ಧ ಕಾನೂನು ರೀತ್ಯಾ ಪ್ರಕರಣ ದಾಖಲಿಸಿ, ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. |
| (ಈ) | ಹಲವಾರು ವಿದೇಶಿ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸಕ್ಕಾಗಿ ಇಲ್ಲಿಗೆ ಬಂದು, ನೆಲೆಸಿ, ಸದರಿ ಸಂಪರ್ಕದ ಮೂಲಕ ತಾವು ಓದುತ್ತಿರುವ ಕಾಲೇಜು ಮತ್ತು ಇತರೇ ಕಾಲೇಜುಗಳ ವಿದ್ಯಾರ್ಥಿಗಳನ್ನು ಗುರಿಯಾಗಿಸಿ ಅವರುಗಳನ್ನು ಡ್ರಗ್ಸ್ ಜಾಲಕ್ಕೆ ಸೆಳೆಯುತ್ತಿರುವ ಹಲವಾರು ಪ್ರಕರಣಗಳು ಕಂಡು ಬಂದಿದ್ದು, ಸದರಿ ಪ್ರಕರಣಗಳಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ? | ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿವೆ ಎಂಬುವುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ, ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ. |

೨೭ ಪಿಎನ್‌ಡಿ 2023(ಇ)

(ಡಾ|| ಜಿ. ಪರಮೇಶ್ವರ)
ಗೃಹ ಸಚಿವರು